Akashvani : Bangalore
Regional Bulletin In Kannada
27.09.2025 / 2.30 pm
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

27.09.2025 / 2.30 pm
<><*<><>*><>

## ಮುಖ್ಯಾಂಶಗಳು

೧. ಬೆಂಗಳೂರು ಮುಂಬೈ ನಡುವೆ ನೂತನ ಸೂಪರ್ ಫಾಸ್ಟ್ ರೈಲಿಗೆ ರೈಲ್ವೇ ಸಚಿವಾಲಯ ಅನುಮೋದನೆ - ಸಂಸದ ತೇಜಸ್ವಿ ಸೂರ್ಯ

೨. ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಬೆಂಗಳೂರು ನಗರ ಪ್ರದಕ್ಷಿಣೆ - ಸುಮನಹಳ್ಳಿ ಮೇಲ್ಸೆತುವೆ ಪರಿಶೀಲಿಸಿದ ಉಪಮುಖ್ಯಮಂತ್ರಿ

೩. ಆಕಾಶವಾಣಿಯ ಜನಪ್ರಿಯ ಮಾಸಿಕ ಮನ್ ಕೀ ಬಾತ್ ನಲ್ಲಿ ನಾಳೆ ಪ್ರಧಾನಿ ಮನದ ಮಾತು

೪. ಬೆಳಗಾವಿ ಯಾದಗಿರಿಯಲ್ಲಿ ನಿರಂತರ ಮಳೆ - ಜನ ಜೀವನ ಅಸ್ತವ್ಯಸ್ತ - ಬೆಳೆಗಳು ಜಲಾವೃತ

><><><><><><

ಬೆಂಗಳೂರು ಮತ್ತು ಮುಂಬೈ ನಡುವೆ ಹೊಸ ಸೂಪರ್ ಫಾಸ್ಟ್ ರೈಲಿಗೆ ಕೇಂದ್ರ ರೈಲ್ವೆ ಸಚಿವಾಲಯ ಅನುಮೋದನೆ ನೀಡಿದೆ. ಈ ವಿಚಾರವನ್ನು ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಸಾಮಾಜಿಕ ಜಾಲ ತಾಣದಲ್ಲಿ ಹಂಚಿಕೊಂಡಿದ್ದು, ಈ ಮೂಲಕ ೩೦ ವರ್ಷಗಳ ಬೇಡಿಕೆ ಈಡೇರಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ. ಸಚಿವ ಅಶ್ವಿನಿ ವೈಷ್ಣವ್ ಮಾತನಾಡಿ ಶೀಘ್ರದಲ್ಲೇ ಬೆಂಗಳೂರು ಟು ಮುಂಬೈ ನಡುವೆ ಸೂಪರ್‌ಫಾಸ್ಟ್ ರೈಲು ಪ್ರಾರಂಭಿಸಲಾಗುವುದು. ಎರಡೂ ನಗರಗಳು ಪ್ರಮುಖ ಆರ್ಥಿಕ ಕೇಂದ್ರಗಳಾಗಿವೆ. ಹಾಗಾಗಿ ಇದು ಪ್ರಮುಖ ಯೋಜನೆ ಆಗಿದೆ ಎಂದು ಹೇಳಿದ್ದಾರೆ. ಈ ಹೊಸ ಸೂಪರ್‌ಫಾಸ್ಟ್ ರೈಲು ಸೇವೆಯು ಲಕ್ಷಾಂತರ ಪ್ರಯಾಣಿಕರಿಗೆ ಕೈಗೆಟುಕುವ ದರದೊಂದಿಗೆ ಅನುಕೂಲಕರವಾಗಲಿದೆ ಎಂದು ಹೇಳಿದ್ದಾರೆ. ಬಹುದಿನದ ಕನಸನ್ನು ನನಸಾಗಿಸಿದ ಪ್ರಧಾನಿ ನರೇಂದ್ರ ಮೋದಿ ಮತ್ತು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಕರ್ನಾಟಕ ಮತ್ತು ಕನ್ನಡಿಗರ ಪರವಾಗಿ ಸಂಸದ ತೇಜಸ್ವಿ

ಸೂರ್ಯ ಕೃತಜ್ಞತೆ ಸಲ್ಲಿಸಿದ್ದಾರೆ. ಜೊತೆಗೆ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರಿಗೆ ಧನ್ಯವಾದ ತಿಳಿಸಿದ್ದಾರೆ.

><><><><><><

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಮಧ್ಯಾಹ್ನ ಬೆಂಗಳೂರು ನಗರ ಪ್ರದಕ್ಷಿಣೆ ಕೈಗೊಳ್ಳಲಿದ್ದಾರೆ. ಮೂರು ಗಂಟೆಗೆ ತಮ್ಮ ಅಧಿಕೃತ ನಿವಾಸ ಕಾವೇರಿಯಿಂದ ಹೊರಡಲಿದ್ದಾರೆ. ಈ ನಡುವೆ ಬೆಂಗಳೂರಿನ ಮಾಗಡಿ ರಸ್ತೆಯ ಸುಮನಹಳ್ಳಿ ಮೇಲ್ಸೇತುವೆ ರಸ್ತೆ ದುರಸ್ತಿ ಕಾಮಗಾರಿಯನ್ನು ಉಪಮುಖ್ಯಮಂತ್ರಿ ಡಿ,ಕೆ ಶಿವಕುಮಾರ್ ಇಂದು ಪರಿಶೀಲನೆ ನಡೆಸಿದರು.

><><><><><><

ಧರ್ಮಸ್ಥಳ ಪ್ರಕರಣದಲ್ಲಿ ಜನರಿಗೆ ವಾಸ್ತವಾಂಶ ತಿಳಿಸುವುದಷ್ಟೇ ಸರ್ಕಾರದ ಉದ್ದೇಶ" ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಎಸ್ ಐ ಟಿ ರಚನೆಯಿಂದ ಕಳಂಕ ಕಳೆಯುತ್ತಿದೆ ಎಂಬ ವೀರೇಂದ್ರ ಹೆಗಡೆಯವರ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿದ ಅವರು ತನಿಖಾ

ವರದಿ ಬರುವ ಮುನ್ನವೇ ಈ ಬಗ್ಗೆ ಪ್ರತಿಕ್ರಿಯಿಸುವುದರಲ್ಲಿ ಅರ್ಥವಿಲ್ಲ ಎಂದು ಹೇಳಿದ್ದಾರೆ. ಈ ವಿಚಾರವಾಗಿ ಮುಖ್ಯಮಂತ್ರಿ ಇಲ್ಲವೇ ಗೃಹ ಸಚಿವರು ಅಧಿಕೃತ ಹೇಳಿಕೆ ನೀಡಬೇಕು ಎಂದು ತಿಳಿಸಿದ್ದಾರೆ. ಎಲ್ಲಾ ವಿಷಯದ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆ. ಆದರೆ ತನಿಖಾ ತಂಡದಿಂದ ಅಧಿಕೃತವಾಗಿ ವರದಿ ಬರಲಿ" ಎಂದು ಹೇಳಿದ್ದಾರೆ.

><><><><><><

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ, ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೮ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ

ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಈ ಕಾರ್ಯಕ್ರಮವನ್ನು ಕೇಳಬಹುದಾಗಿದೆ.

><><><><><

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ದಸರಾ ಸಂಭ್ರಮ ಕಳೆಗಟ್ಟಿದೆ. ಇದು ಬೆಳ್ಳಂಬೆಳ್ಳಗೆ ಇಪ್ಪತ್ತಕ್ಕೂ ಹೆಚ್ಚು ಟಾಂಗಾ ಗಾಡಿಗಳು ಸಾಂಪ್ರದಾಯಿಕ ಉಡುಗೆ ತೊಟ್ಟು ನವ ವಧುವರರಂತೆ ಕಂಗೊಳಿಸುತ್ತಿದ್ದ ಜೋಡಿಗಳನ್ನು ಕೂರಿಸಿಕೊಂಡು ಅರಸರ ಇತಿಹಾಸ ಸಾರುವ ಪಾರಂಪರಿಕ ಕಟ್ಟಡಗಳ ಕುರಿತು ಮಾಹಿತಿ ಹಂಚುವುದರ ಜೊತೆಗೆ ಮೈಸೂರಿನ ಜನರ ಕುತೂಹಲವನ್ನು ಹೆಚ್ಚಿಸಿತು. ನಶಿಸಿ ಹೋಗುತ್ತಿರುವ ಪಾರಂಪರಿಕ ಟಾಂಗಾಗಳ ಉಳಿಸುವಿಕೆ ಉದ್ದೇಶದಿಂದಾಗಿ ಆಯೋಜಿಸಲಾಗಿದ್ದ ಟಾಂಗಾ ಸವಾರಿಗೆ ಚಿತ್ರ ನಿರ್ದೇಶಕ ಪ್ರಕಾಶ್ ತುಮಿನಾಡು ದಂಪತಿ ಟಾಂಗಾ ಸವಾರಿ ಮಾಡುವುದರೊಂದಿಗೆ ಚಾಲನೆ ನೀಡಿದರು. ಪಾರಂಪರಿಕ ಉಡುಗೆಯೊಂದಿಗೆ ಟಾಂಗಾ ಸವಾರಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಜಿಲ್ಲೆಯ ವಿವಿಧೆಡೆಯಿಂದ ದಂಪತಿಗಳು ಆಗಮಿಸಿದ್ದು, ರಾಜ್ಯದ

ಸಂಸ್ಕೃತಿಯನ್ನು ಬಿಂಬಿಸಿದರು. ಮೈಸೂರು ಪೇಟ, ಪಂಚೆ ಮತ್ತು ಶಲ್ಯದೊಂದಿಗೆ ಪತಿ ಸಿದ್ಧವಾಗಿದ್ದರೆ ರೇಷ್ಮೆ ಸೀರೆ, ಮಲ್ಲಿಗೆ ಮುಡಿದು ಹೆಂಗಳೆಯರು ತಯಾರಾಗಿದ್ದರು. ಉತ್ತರ ಕರ್ನಾಟಕ, ಕೊಡಗು, ಗೌಡರ ಶೈಲಿಯಲ್ಲಿಯೂ ದಂಪತಿಗಳು ಉಡುಗೆ ತೊಟ್ಟು ಕಂಗೊಳಿಸಿದರು.

><><><><><

ಎಫ್‌ಕೆಸಿಸಿಐನ ಮೊದಲ ಮಹಿಳಾ ಅಧ್ಯಕ್ಷರಾಗಿ ಉಮಾ ರೆಡ್ಡಿ ಆಯ್ಕೆಗೊಂಡಿದ್ದಾರೆ. ಸರ್ ಎಂ. ವಿಶ್ವೇಶ್ವರಯ್ಯ ಸ್ಥಾಪಿಸಿದ ೧೦೮ ವರ್ಷ ಹಳೆಯ ಸಂಸ್ಥೆ ಇದಾಗಿದ್ದು ಇದೇ ಮೊದಲ ಬಾರಿಗೆ ಮಹಿಳೆಯೊಬ್ಬರು ಅಧ್ಯಕ್ಷರಾಗಿದ್ದಾರೆ. ನಾವೀನ್ಯತೆ, ಮಹಿಳಾ ಉದ್ಯಮಿಗಳು ಮತ್ತು ಸಣ್ಣ ಮತ್ತು ಸೂಕ್ಷ್ಮ ಕೈಗಾರಿಕೆಗ ಸಬಲೀಕರಣಕ್ಕಾಗಿ ಇವರು ಶ್ರಮಿಸಿದ್ದಾರೆ. ಹಲವಾರು ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಕೈಗಾರಿಕಾ ಸಮಿತಿಗಳಿಗೂ ಕೊಡುಗೆ ನೀಡಿದ್ದಾರೆ. ಉಮಾ ರೆಡ್ಡಿ ಮಹಿಳಾ ನೇತೃತ್ವದ ಉದ್ಯಮಗಳಿಗೆ ಮಾರ್ಗದರ್ಶನ ಮತ್ತು ಬೆಂಬಲ ನೀಡಿದ್ದಾರೆ.

><><><><><

ಕಳೆದ ಎರಡು ದಿನಗಳಿಂದ ಪಶ್ಚಿಮ ಘಟ್ಟ ಹಾಗೂ ಬೆಳಗಾವಿ ಜಿಲ್ಲೆಯಾದ್ಯಂತ ನಿರಂತರ ಮಳೆಯಾಗುತ್ತಿದ್ದು, ಜನ ಜೀವನ ಅಸ್ತವ್ಯಸ್ತಗೊಂಡಿದೆ. ಮಲಪ್ರಭಾ ಜಲಾನಯನ ಪ್ರದೇಶದಲ್ಲೂ ಮುಂದುವರೆದ ಮಳೆಯ ಅಬ್ಬರ ಮುಂದುವರೆದಿದೆ. ಇದರಿಂದಾಗಿ ಮಲಪ್ರಭಾ ಡ್ಯಾಮ್ ನಿಂದ ೧ ಸಾವಿರದ ೫೦೦ ಕ್ಯೂಸೆಕ್ ನೀರು ಬಿಡುಗಡೆ ಮಾಡಲಾಗಿದೆ.

><><><><><><

ಯಾದಗಿರಿ ಜಿಲ್ಲೆಯಲ್ಲಿ ಮಳೆಯಿಂದಾಗಿ ಜನಜೀವನ ಅಸ್ತವ್ಯಸ್ತಗೊಂಡಿದೆ. ಕೃಷಿ ಚಟುವಟಿಕೆಗಳು ಸಂಪೂರ್ಣವಾಗಿ ಸ್ಥಗಿತಗೊಂಡಿದ್ದು ವ್ಯಾಪಾರ ವಹಿವಾಟಿಗೂ ಅಡ್ಡಿಯಾಗಿದೆ. ಯಾದಗಿರಿ ತಾಲ್ಲೂಕಿನ ಸೌದಾಗರ್ ತಾಂಡಾದ ಮನೆಗಳಿಗೆ ಮಳೆಯ ನೀರು ನುಗ್ಗಿದೆ. ಮನೆಯಲ್ಲಿನ ಧವಸ ಧಾನ್ಯಗಳು ನೀರಲ್ಲಿ ಕೊಚ್ಚಿ ಹೋಗಿವೆ. ಭೀಮಾ ನದಿಗೆ ಉಜಿನಿ ಜಲಾಶಯದಿಂದ ಸಾಕಷ್ಟು ನೀರು ಹರಿ ಬಿಡಲಾಗುತ್ತಿದೆ. ಸನ್ನತಿ ಬ್ಯಾರೇಜ್ ನಿಂದ ೨.೭೦ ಲಕ್ಷ ಕ್ಯುಸೆಕ್ ನೀರು ನದಿಗೆ ಹರಿಬಿಡಲಾಗಿದೆ. ನದಿ ಪಾತ್ರದ

ಎರಡೂ ಕಡೆಯ ಜಮೀನುಗಳಿಗೆ ಪ್ರವಾಹದ ನೀರು ಅಲ್ಲಲ್ಲಿ ನುಗ್ಗಿದೆ. ಉಜನಿ ಡ್ಯಾಮ್ ನಿಂದ ಇನ್ನೂ ಹೆಚ್ಚಿನ ಪ್ರಮಾಣ ನೀರು ಭೀಮಾ ನದಿಗೆ ಹರಿದು ಬರುವ ಸಾಧ್ಯತೆ ಇದೆ. ಸನ್ನತಿ ಬ್ಯಾರೇಜ್‌ನಿಂದ ಸುಮಾರು ೪ ಲಕ್ಷ ಕ್ಯೂಸೆಕ್ ನೀರು ಹರಿಸಬಹುದು ಎಂದು ಯಾದಗಿರಿ ಹೆಚ್ಚುವರಿ ಜಿಲ್ಲಾಧಿಕಾರಿ ರಮೇಶ್ ಕೋಲಾರ ತಿಳಿಸಿದ್ದಾರೆ. ನದಿಗೆ ಇಳಿಯದಂತೆ, ಜಾನುವಾರುಗಳನ್ನು ಬಿಡದಂತೆ ಸಾರ್ವಜನಿಕರಿಗೆ ಜಿಲ್ಲಾಡಳಿತ ಎಚ್ಚರಿಕೆ ನೀಡಿದೆ.

><><><><><><

ಇಂದು ಉತ್ತರನಾಡು ಹಾಗೂ ಕರಾವಳಿಯ ಹಲವೆಡೆ ವ್ಯಾಪಕ ಮಳೆಯಾಗಿದೆ. ಕರಾವಳಿ ಜಿಲ್ಲೆಗಳಲ್ಲಿ ಇಂದಿನಿಂದ ಅಕ್ಟೋಬರ್ ಮೂರರವರೆಗೆ ವ್ಯಾಪಕ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ನಿರ್ದೇಶಕ ಡಾ. ಸಿ ಎಸ್ ಪಾಟೀಲ್ ತಿಳಿಸಿದ್ದಾರೆ. ಉತ್ತರ ಕನ್ನಡ ಹಾಗೂ ಉಡುಪಿ ಜಿಲ್ಲೆಯಲ್ಲಿ ಬಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು

ಹೇಳಿದ್ದಾರೆ. ಬೆಂಗಳೂರಿನಲ್ಲಿ ಇಂದು ಹಾಗೂ ನಾಳೆ ಕೆಲವೆಡೆ ಹಗುರವಾಗಿ ಮಳೆಯಾಗಲಿದೆ ಎಂದು ತಿಳಿಸಿದ್ದಾರೆ.

ಧ್ವನಿ: ಸಿ.ಎಸ್ ಪಾಟೀಲ್

><><><><><><

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಅಣೇಶ್ವರ ಗ್ರಾಮಪಂಚಾಯಿತಿಯ ಬೈಚಾರಪುರ ಗ್ರಾಮದಲ್ಲಿ ಸ್ವಚ್ಚತೆಯೇ ಸೇವೆ ಅಭಿಯಾನ ನಡೆಯಿತು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ.ಕೆ.ಎನ್.ಅನುರಾಧ ಸ್ವಚ್ಛತಾ ಕಾರ್ಯ ಕ?ಗೊಳ್ಳುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಸಾರ್ವಜನಿಕ ಸ್ಥಳಗಳಲ್ಲಿ ಕಸವನ್ನು ಸುರಿಯುವುದನ್ನು ತಡೆಗಟ್ಟಲು ಸಿಸಿಕ್ಯಾಮೆರಾ ಮತ್ತು ಸೂಚನೆ ಫಲಕಗಳನ್ನು ಅಳವಡಿಸಲಾಗಿದೆ. ಕಸವನ್ನು ಸಾರ್ವಜನಿಕ ಸ್ಥಳಗಳಲ್ಲಿ ಹಾಕಿದರೆ ದಂಡವನ್ನು ವಸೂಲಿ ಮಾಡಲಾಗುತ್ತಿದೆ. ಬ್ಲಾಕ್ ಸ್ಪಾಟ್ ಗಳಲ್ಲಿನ ಕಸದ

ರಾಸಿಗಳನ್ನು ತೆರವುಗೊಳಿಸಿ ಶುಚಿತ್ವವನ್ನು ಕಾಪಾಡಲಾಗುತ್ತಿದೆ ಎಂದು ಹೇಳಿದರು.

><><><><><

ದಾವಣಗೆರೆಯಲ್ಲಿ ನಡೆದಿದ್ದ ಕಲ್ಲು ತೂರಾಟ ಪ್ರಕರಣ ಸಂಬಂಧ ಈವರೆಗೆ ೮ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಸಮಾಜದ ಸ್ವಾಸ್ಥ್ಯ ಕದಡುವ ಯತ್ನ ನಡೆಸಿದರೆ ಕಾನೂನು ಕ್ರಮ ಕೈಗೊಳ್ಳೋದಾಗಿ ದಾವಣಗೆರೆ ಎಸ್ಪಿ ಉಮಾ ಪ್ರಶಾಂತ್ ತಿಳಿಸಿದ್ದಾರೆ. ಘಟನೆ ಸಂಬಂಧ ೧೦೭ ಜನರ ವಿರುದ್ಧ ಎಫ್ಐಆರ್ ದಾಖಲಿಸಲಾಗಿತ್ತು. ಘಟನೆ ಬಳಿಕ ಸ್ಥಳದಲ್ಲಿ ಬಿಗಿ ಭದ್ರತೆ ಒದಗಿಸಿದ್ದ ಪೊಲೀಸರು, ಯಾವುದೇ ಅಹಿತಕರ ಸುದ್ದಿ ಹರಡದಂತೆ ಸಾಮಾಜಿಕ ಜಾಲತಾಣಗಳ ಮೇಲೂ ನಿಗಾ ಇರಿಸಿದ್ದರು. ಬಳಿಕ ಘಟನಾ ಸ್ಥಳದಲ್ಲಿ ಪರಿಸ್ಥಿತಿ ಶಾಂತಗೊಂಡಿತ್ತು.

><><><><><

ಹಿಂದುಳಿದ ವರ್ಗದ ಆಯೋಗದಿಂದ ಬಳ್ಳಾರಿ ಜಿಲ್ಲೆಯಲ್ಲಿ ಆರಂಭಗೊಂಡಿರುವ ಸಾಮಾಜಿಕ, ಶೈಕ್ಷಣಿಕ, ಜಾತಿಗಣತಿ ವೇಗ

ಪಡೆದುಕೊಂಡಿದೆ. ಜಿಲ್ಲೆಯ ಐದು ತಾಲೂಕುಗಳ ೧೩ ಹೋಬಳಿಗಳ ೧೦೦ ಗ್ರಾಮಪಂಚಾಯತ್ ಗಳ ೨೯೬ ಗ್ರಾಮಗಳು ಮತ್ತು ನಗರ ಪ್ರದೇಶದ ೮ ನಗರ ಸ್ಥ ಳೀಯ ಸಂಸ್ಥೆಗಳಲ್ಲಿ ಸರ್ವೇ ಕಾರ್ಯ ನಡೆದಿದೆ. ೧೭೨ ಜನ ಮೇಲ್ವಿಚಾರು, ೭೦ಜನ ಮಾಸ್ಟರ್ ಟ್ರೈನರ್ ಗಳ ಜೊತೆ ೩ ಸಾವಿರದ ೬೬೩ ಸಿಬ್ಬಂದಿ ಸರ್ವೇ ಕಾರ್ಯದಲ್ಲಿ ತೊಡಗಿಕೊಂಡಿದ್ದಾರೆ. ಹಳ್ಳಿಗಳಲ್ಲಿ ಸಮೀಕ್ಷೆ ಹೆಚ್ಚಿನ ವೇಗ ಪಡೆದುಕೊಂಡಿದ್ದರೆ, ನಗರ ಪ್ರದೇಶದಲ್ಲಿ ಒಂದಿಷ್ಟು ಮಂದಗತಿಯಲ್ಲಿದೆ. ಸಮೀಕ್ಷೆಯನ್ನು ಸರ್ಕಾರ ನಿಗದಿಪಡಿಸಿದ ಕಾಲಾವಧಿಯೊಳಗೆ ಮುಗಿಸುವ ಪ್ರಯತ್ನ ನಡೆದಿದೆ ಎಂದು ಜಿಲ್ಲಾಧಿಕಾರಿ ಕೆ.ನಾಗೇಂದ್ರ ಪ್ರಸಾದ್ ಹೇಳಿದ್ದಾರೆ

><><><END><><><